ಕ್ರ.ಸಂಖ್ಯೆ - 29

<u>ವಿಧಾನ ಪರಿಷತ್ ಸದಸ್ಯರಾದ ಡಾ|| ವೈ.ಎ. ನಾರಾಯಣಸ್ವಾಮಿ ಇವರು ನಿಯಮ 72ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಹೇಳಿಕೆ</u>

-- * --

<u>ವಿಷಯ</u>

ಕರ್ನಾಟಕ ಸರ್ಕಾರದ ವ್ಯಾಪ್ತಿಯಲ್ಲಿ ಬರುವ ಕೆ.ಐ.ಎ.ಡಿ.ಬಿ.ಗೆ ಸರ್ಕಾರಿ ವಕೀಲರನ್ನು ನೇಮಿಸುವಾಗ ಯಾವುದೇ ಅರ್ಹತಾ ಪರೀಕ್ಷೆ ಇಲ್ಲದೆ ಯಾವುದೇ ಮಾನದಂಡಗಳನ್ನು ರೂಪಿಸದೇ ಹಾಗೂ ಅನುಸರಿಸದೇ ನೇಮಕ ಮಾಡಿಕೊಳ್ಳುತ್ತಿರುವುದರಿಂದ ಮೇಲ್ಕಂಡ ಸಂಸ್ಥೆಗಳಿಗೆ ನ್ಯಾಯಾಲಯದಲ್ಲಿ ಬಹಳ ಹಿನ್ನಡೆಯಾಗುತ್ತಿರುವ ವಿಚಾರದ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಗಮನ ಸೆಳೆಯ ಬಯಸುತ್ತೇನೆ.

<u>ಉತ್ತರ</u>

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ವಿರುದ್ಧ ವಿವಿಧ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ಸರ್ಕಾರಿ ವಕೀಲರನ್ನು ನೇಮಿಸುವ ಪ್ರಕ್ರಿಯೆ ಜಾರಿಯಲ್ಲಿರುವುದಿಲ್ಲ. ಅದರ ಬದಲಾಗಿ ಮಂಡಳಿಯಲ್ಲಿ ವಕೀಲರ ಪ್ಯಾನಲ್ ಪಟ್ಟಿ ಇದ್ದು, ಸದರಿ ವಕೀಲರಿಗೆ ಅವರ ಅನುಭವ ಮತ್ತು ವಿಷಯ ಪರಿಣಿತಿ ಹಾಗೂ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸುವ ಸಾಮರ್ಥ್ಯಕ್ಕೆ ಅನುಗುಣವಾಗಿ ಪ್ರಕರಣಗಳನ್ನು ವಹಿಸಲಾಗುತ್ತಿದೆ. ಅಲ್ಲದೇ, ಅತ್ಯಂತ ಗಂಭೀರ ಸ್ವರೂಪದ ಹಾಗೂ ಪ್ರಮುಖ ಪ್ರಕರಣಗಳಲ್ಲಿ ಮಂಡಳಿಯ ವಕೀಲರ ಜೊತೆಗೆ ಅಡ್ವೋಕೇಟ್ ಜನರಲ್, ಹಿರಿಯ ವಕೀಲರ ಸೇವೆಯನ್ನು ಪಡೆದು ಪ್ರಕರಣಗಳನ್ನು ಇತ್ಯರ್ಥಪಡಿಸಲು ಕ್ರಮವಹಿಸಲಾಗುತ್ತಿದೆ.

ಕೆ.ಐ.ಎ.ಡಿ.ಬಿ.ಯ ಪ್ಯಾನಲ್ ಪಟ್ಟಿಯಲ್ಲಿ ಅನುಭವಿ ವಕೀಲರುಗಳಿದ್ದು, ಅವರಿಗೆ ಪ್ರಕರಣಗಳನ್ನು ವಹಿಸಲಾಗುತ್ತಿದೆ. ಕೆ.ಐ.ಎ.ಡಿ.ಬಿ.ಗೆ ಸಂಬಂಧಿಸಿದಂತೆ ವಿವಿಧ ನ್ಯಾಯಾಲಯಗಳಲ್ಲಿ ಭೂಸ್ವಾಧೀನ ಹಾಗೂ ಹಂಚಿಕೆ ವಿಷಯಗಳಿಗೆ ಸಂಬಂಧಿಸಿದಂತೆ ಒಟ್ಟು 1413 ಪ್ರಕರಣಗಳು ಇತ್ಯರ್ಥವಾಗಿದ್ದು,

ಇವುಗಳಲ್ಲಿ ಮಂಡಳಿಯ ಪರ 1125 ಪ್ರಕರಣಗಳು ಹಾಗೂ ಮಂಡಳಿಯ ವಿರುದ್ಧ 288 ಪ್ರಕರಣಗಳು ಇತ್ಯರ್ಥವಾಗಿರುತ್ತವೆ. ಕೆ.ಐ.ಎ.ಡಿ.ಬಿ.ಯ ವಿರುದ್ಧ ಇತ್ಯರ್ಥವಾದ ಪ್ರಕರಣಗಳಲ್ಲಿ ಮೇಲ್ಮನವಿ ಸಲ್ಲಿಸಲು ಕ್ರಮವಹಿಸಲಾಗುತ್ತಿದೆ.

ಮುಂದುವರೆದು, ಸರ್ಕಾರ ಮತ್ತು ಕೆ.ಐ.ಎ.ಡಿ.ಬಿ.ಯ ವಿರುದ್ಧ ವಿವಿಧ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸುವ ನಿಟ್ಟಿನಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮತ್ತು ಕಾರ್ಯನಿರ್ವಾಹಕ ಸದಸ್ಯರು, ಕೆ.ಐ.ಎ.ಡಿ.ಬಿ. ಇವರುಗಳು ಸಭೆಗಳನ್ನು ನಡೆಸಿ, ಮಂಡಳಿಯ ವಕೀಲರಿಗೆ ಸಲಹೆ ಸೂಚನೆಗಳನ್ನು ಆಗಿಂದಾಗ್ಗೆ ನೀಡಲಾಗುತ್ತಿದೆ.

ಆದ್ದರಿಂದ, ಕೆ.ಐ.ಎ.ಡಿ.ಬಿ.ಗೆ ಸಂಬಂಧಪಟ್ಟಂತೆ ನ್ಯಾಯಾಲಯದಲ್ಲಿರುವ ಪ್ರಕರಣಗಳು ಇತ್ಯರ್ಥವಾಗುವಾಗ ಹಾಗೂ ನಿರ್ವಹಿಸುವಾಗ ಸರ್ಕಾರಕ್ಕೆ ಹಾಗೂ ಕೆ.ಐ.ಎ.ಡಿ.ಬಿ.ಗೆ ಯಾವುದೇ ಹಿನ್ನಡೆ ಆಗದಂತೆ ಸೂಕ್ತ ಮತ್ತು ಸಮಯೋಚಿತ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ಸಿಐ 162 ಐಎಪಿ (ಇ) 2021

(ಮುರುಗೇಶ್ ಆರ್.ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು